ಡಾ|| ಎಸ್. ಬಿ. ಬೊಮ್ಮನಹಳ್ಳಿ ಭಾ.ಆ.ಸೇ.
Dr. S. B. Bommanahalli I.A.S.

ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ
ಬೆಳಗಾವಿ ಜಿಲ್ಲೆ, ಬೆಳಗಾವಿ-590001
Deputy Commissioner and
District Magistrate, Belagavi, Karnataka
Off : 0831-2407200,2407273 ,
Fax : 0831-2452644 Resi : 2407222
E-mail : deo.belagavi@gmail.com

ಕ್ರ.ಸಂಖ್ಯೆ: ಜಿಕೌಮಿಬೆ:ಪ್ರಾ.ಉ.ಮೇ:2019-20/ ದಿನಾಂಕ: 17-02-2020.

ಜಿಲ್ಲಾ ನ್ಯಾಯಾಲಯ,

ವಿಷಯ: ದಿನಾಂಕ 28 ಮತ್ತು 29 ಫೆಬ್ರವರಿ-2020 ರಂದು ನಡೆಯುವ ಬೆಳಗಾವಿ, ಹುಬ್ಬಳ್ಳಿ-ಧಾರವಾಡ ಪ್ರಾದೇಶಿಕ ಮಟ್ಟದ ಉದ್ಯೋಗ ಮೇಳದಲ್ಲಿ ಉದ್ಯೋಗಾಕಾಂಕ್ಷಿ ವಿದ್ಯಾರ್ಥಿಗಳನ್ನು ನೋಂದಣಿ ಮಾಡಿಸುವ ಕುರಿತು.

ಜಿಲ್ಲಾಡಳಿತ ಬೆಳಗಾವಿ, ಧಾರವಾಡ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಸರಕಾರ ಸಹಯೋಗದಲ್ಲಿ ಬೆಳಗಾವಿ, ಹುಬ್ಬಳ್ಳಿ-ಧಾರವಾಡ ಪ್ರಾದೇಶಿಕ ಮಟ್ಟದ ಉದ್ಯೋಗ ಮೇಳವನ್ನು ದಿನಾಂಕ 28 ಮತ್ತು 29ನೇ ಫೆಬ್ರವರಿ-2020 ರಂದು ಬೆಳಗಾವಿಯ ಎಸ್.ಜಿ.ಬಾಳೇಕುಂದ್ರಿ ಇನ್ಸಿಟ್ಯೂಟ್ ಆಫ್ ಟೆಕ್ನೋಲಾಜಿ ಕ್ಯಾಂಪಸ್‌ನಲ್ಲಿ ಏರ್ಪಡಿಸಲಾಗಿರುತ್ತದೆ.

ಬೆಳಗಾವಿಯಲ್ಲಿ ಆಯೋಜಿಸುತ್ತಿರುವ ಈ ಉದ್ಯೋಗ ಮೇಳದಲ್ಲಿ ಸುಮಾರು 150 ಕ್ಕೂ ಹೆಚ್ಚು ಉದ್ಯೋಗದಾತ ಕಂಪನಿಗಳು ವಿವಿಧ ಹುದ್ದೆಗಳಿಗೆ ಬೇಡಿಕೆಯಾಗಿಟ್ಟುಕೊಂಡು ಪಾಲ್ಗೊಳ್ಳುವ ನಿರೀಕ್ಷೆ ಇದೆ. ರಾಜ್ಯದ ಪ್ರಮುಖ ಕಂಪನಿಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸುವ ಇಚ್ಛೆ ವ್ಯಕ್ತಪಡಿಸಿರುತ್ತವೆ.

ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ, ನರ್ಸಿಂಗ, ಡಿಪ್ಲೋಮಾ, ಎಲ್ಲಾ ಪದವಿ ಮತ್ತು ಉನ್ನತ ಪದವಿ ಹಾಗೂ ಇಂಜಿನೀಯರಿಂಗ ಪಾಸಾದ ಎಲ್ಲಾ ಅಭ್ಯರ್ಥಿಗಳಿಗೆ ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳೂ ಸಹ ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ಉದ್ಯೋಗಾಕಾಂಕ್ಷಿಗಳು ಈ ಬೆಳಗಾವಿಯಲ್ಲಿ ನಡೆಯುವ ಪ್ರಾದೇಶಿಕ ಮಟ್ಟದ ಉದ್ಯೋಗ ಮೇಳದಲ್ಲಿ ಭಾಗವಹಿಸಲು **"www.belagaviudyogamela.in"** ವೆಬ್ ಪೋರ್ಟಲ್‌ನಲ್ಲಿ ನೋಂದಾಯಿಸಿ-ಕೊಳ್ಳಬೇಕಾಗುತ್ತದೆ.

ಈ ಹಿನ್ನಲೆಯಲ್ಲಿ ತಾವು ತಮ್ಮ ಮತ್ತು ತಮ್ಮ ಅಧೀನದಲ್ಲಿ ಬರುವ ಎಲ್ಲಾ ವಿದ್ಯಾ ಸಂಸ್ಥೆಗಳಿಗೆ ಈ ಬಗ್ಗೆ ಸೂಕ್ತ ನಿರ್ದೇಶನ ನೀಡಿ, ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ನೋಂದಾಯಿಸಿಕೊಂಡು ಈ ಉದ್ಯೋಗ ಮೇಳದ ಸದುಪಯೋಗ ಪಡೆದುಕೊಳ್ಳುವಲ್ಲಿ ಸೂಕ್ತ ಕ್ರಮ ಕೈಗೊಳ್ಳಲು, ತಮ್ಮನ್ನು ಈ ಮೂಲಕ ಕೋರಲಾಗಿದೆ.

ಕೌಶಲ್ಯ ವಿಭಾಗಕ್ಕೆ ಕಳಿಸಿ,

ತಮ್ಮ ವಿಶ್ವಾಸಿ

17/2/2020

ಗೆ,

ಪ್ರೊ. ಎಂ.ರಾಮಚಂದ್ರಗೌಡ,
ಕುಲಪತಿಗಳು, ರಾಣಿ ಚನ್ನಮ್ಮಾ ವಿಶ್ವವಿದ್ಯಾಲಯ,
ಬೆಳಗಾವಿ.

Scanned by CamScanner